# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 184 (264)

ಸದಸ್ಯರ ಹೆಸರು : ಶ್ರೀ. ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ಸಚಿವರು : ಗಣಿ ಮತ್ತು ಭೂ-ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

ಉತ್ತರಿಸಬೇಕಾದ ದಿನಾಂಕ : 09.12.2025.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅಡಿಕೆ ಬೆಳೆಗಾರರು ಎದುರಿಸುತ್ತಿರುವ ಹಳದಿ ರೋಗ ಮತ್ತು ಎಲೆಚುಕ್ಕಿ ರೋಗದ ಕುರಿತು ಸಮೀಕ್ಷೆ ನಡೆಸಲಾಗಿದೆಯೇ; ನಡೆಸಿದ್ದರೆ ಜಿಲ್ಲಾವಾರು ವಿವರ ಒದಗಿಸುವುದು; ಸಮೀಕ್ಷೆ ನಡೆಸಿಲ್ಲವಾದಲ್ಲಿ ಇನ್ನೂ ಯಾಕೆ ಸರ್ಕಾರ ಈ ಬಗ್ಗೆ ಕ್ರಮವಹಿಸಿಲ್ಲ; ಸಮೀಕ್ಷೆ ನಡೆಸಲು ಯಾವಾಗ ಕ್ರಮಕೈಗೊಳ್ಳಲಾಗುವುದು; | ರಾಜ್ಯದಲ್ಲಿ ಅಡಿಕೆ ಬೆಳೆಗಾರರು ಎದುರಿಸುತ್ತಿರುವ ಹಳದಿ ರೋಗ ಮತ್ತು ಎಲೆಚುಕ್ಕಿ ರೋಗದ ಕುರಿತು ಸಮೀಕ್ಷೆ ನಡೆಸಲಾಗಿರುವುದಿಲ್ಲ ಆದರೆ ಈ ಬಗ್ಗೆ ಕೆಳಕಾಣಿಸಿದ ಕ್ರಮಕೈಗೊಳ್ಳಲಾಗಿದೆ.<br>1. 2023-24 ನೇ ಸಾಲಿನಲ್ಲಿ ಕೇಂದ್ರ ಸರ್ಕಾರ ರಚಿಸಿದ ವೈಜ್ಞಾನಿಕ ಸಮಿತಿಯು ಎಲೆ ಚುಕ್ಕೆ ರೋಗಕ್ಕೆ ಹಾನಿಗೊಳಗಾದ ಹಲವು ಪ್ರದೇಶಗಳಿಗೆ ಭೇಟಿ ನೀಡಿದೆ. ಬೆಳೆ ಸಮೀಕ್ಷೆ ವರದಿ ಆಧಾರದ ಮೇಲೆ ಹಾನಿಯ ಪ್ರಮಾಣವನ್ನು ಗಮನಿಸಿ ಹಾನಿಗೊಳಗಾದ ಪ್ರದೇಶದ ಮಾಹಿತಿಯನ್ನು ಸಂಗ್ರಹಿಸಿದೆ.<br>2. ಪ್ರಸಕ್ತ ಸಾಲಿನಲ್ಲಿ ಕಣ್ಣಂದಾಜಿನ ಪ್ರಕಾರ ಮಾಹಿತಿಯನ್ನು ಸಂಗ್ರಹಿಸಲಾಗಿದ್ದು, ಜಿಲ್ಲಾವಾರು ವಿವರ ಕೆಳಕಂಡಂತಿದೆ. |

| ಕ್ರ. ಸಂ. | ಜಿಲ್ಲೆ | ಅಡಿಕೆ ಎಲೆ ಚುಕ್ಕೆ ರೋಗ ಬಾಧೆಗೆ ಹಾನಿಗೊಳಗಾದ ವಿಸ್ತೀರ್ಣ (ಹೆ) | ಹಳದಿ ಎಲೆ ರೋಗ ಬಾಧೆಗೆ ಹಾನಿಗೊಳಗಾದ ವಿಸ್ತೀರ್ಣ (ಹೆ) |
|---|---|---|---|
| 1. | ಚಿಕ್ಕಮಗಳೂರು | 25210 | 9625 |
| 2. | ಶಿವಮೊಗ್ಗ | 32124 | - |
| 3. | ಉತ್ತರ ಕನ್ನಡ | 8730 | - |
| 4. | ಹಾಸನ | 360 | - |
| 5. | ದಕ್ಷಿಣ ಕನ್ನಡ | 20830 | 2000 |
| 6. | ಉಡುಪಿ | 455 | - |
| 7. | ಕೊಡಗು | 850 | 2142 |
| | **ಒಟ್ಟು** | **88559** | **13767** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಆ) | ಹಳದಿ ರೋಗ ಮತ್ತು ಎಲೆಚುಕ್ಕಿ ರೋಗಗಳಿಂದ ಅಡಿಕೆ ತೋಟಗಳು | ಬಂದಿದೆ.<br>ಅಡಿಕೆ ಹಳದಿ ರೋಗ ಮತ್ತು ಎಲೆಚುಕ್ಕಿ ರೋಗ ನಿಯಂತ್ರಿಸಲು |

ಕೆಲವೊಂದು ಭಾಗಗಳಲ್ಲಿ ಸಂಪೂರ್ಣ / ಭಾಗಶಃ ನಾಶವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ಈ ಸಮಸ್ಯೆಗಳ ಪರಿಹಾರಕ್ಕೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ;

ತೆಗೆದುಕೊಂಡ ಕ್ರಮಗಳು ಈ ಕೆಳಗಿನಂತಿವೆ:

1. 2025-26 ನೇ "Special Interventions" ಕಾರ್ಯಕ್ರಮದಡಿ ಅಡಿಕೆ ಬೆಳೆಯಲ್ಲಿ ಎಲೆಚುಕ್ಕೆ ರೋಗದ ನಿಯಂತ್ರಣ ಕಾರ್ಯಕ್ರಮಕ್ಕೆ ಜಿಲ್ಲೆಗೆ ಒಟ್ಟು ರೂ.860.65 ಲಕ್ಷಗಳ ಅನುದಾನ ನಿಗದಿಯಾಗಿದ್ದು, ಕಾರ್ಯಕ್ರಮವು ಪ್ರಗತಿಯಲ್ಲಿರುತ್ತದೆ ಹಾಗೂ ಈವರೆವಿಗೂ 10069 ರೈತರಿಗೆ ರೂ.414.47 ಲಕ್ಷಗಳ ಸಹಾಯಧನ ನೀಡಲಾಗಿರುತ್ತದೆ.

2. ಮುಂಗಾರು ಮತ್ತು ಹಿಂಗಾರು ಹಂಗಾಮುಗಳಿಗೆ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆವಿಮೆ ಯೋಜನೆಯಡಿ ಜಿಲ್ಲೆಗಳಿಗೆ ಅಡಿಕೆ ಬೆಳೆಯು ಅಧಿಸೂಚಿತವಾಗಿದ್ದು, ಹವಾಮಾನ ವೈಪರೀತ್ಯದಿಂದ ಬೆಳೆ ನಷ್ಟ ಸಂಭವಿಸಿದಲ್ಲಿ ಸದರಿ ಯೋಜನೆಯಡಿ ನಷ್ಟ ಪರಿಹಾರವನ್ನು ಒದಗಿಸಲಾಗುತ್ತಿದೆ.

ಇ) ಈ ರೋಗಗಳಿಂದ ತೋಟಗಳನ್ನು ಕಳೆದು ಕೊಂಡಿರುವ ರೈತರಿಗೆ ಪರಿಹಾರ ನೀಡಲಾಗಿದೆಯೇ; ನೀಡಿದ್ದರೆ ಎಕರೆಗೆ ಎಷ್ಟು ಪರಿಹಾರ ನೀಡಲಾಗಿದೆ; (ವಿವರ ಒದಗಿಸುವುದು); ಪರಿಹಾರ ನೀಡಿಲ್ಲವಾದಲ್ಲಿ ಪರಿಹಾರವನ್ನು ನೀಡಲು ಯಾವಾಗ ಕ್ರಮವಹಿಸಲಾಗುವುದು; ಎಕರೆಗೆ ಎಷ್ಟು ಮೊತ್ತದ ಪರಿಹಾರ ನೀಡಲಾಗುವುದು; ಈ ನಿಟ್ಟಿನಲ್ಲಿ ಸರ್ಕಾರದ ನಿಲುವೇನು;

| **ಕ್ರ. ಸಂ.** | **ಅಡಿಕೆ ಬೆಳೆಯುವ ಜಿಲ್ಲೆಗಳಿಗೆ ಸಂಬಂಧಿಸಿದಂತೆ 2024-25 ನೇ ಸಾಲಿನ ಬೆಳೆ ವಿಮೆ ವಿವರ** | |
|---|---|---|
| 1. | ಅರ್ಜಿಗಳ ಸ್ವೀಕೃತ (ಸಂಖ್ಯೆ) | 528705 |
| 2. | ವಿಸ್ತೀರ್ಣ (Covered) ಹೆಕ್ಟೇರ್ ಗಳಲ್ಲಿ | 173060.42 |
| 3. | ವಿಮಾ ಮೊತ್ತ (Sum insured) (Amount in Lakhs) | 221517.33 |
| 4. | ಪಾವತಿಸಲಾದ ವಿಮಾ ಮೊತ್ತ (Claim amount in Lakhs) | 34444.94 |
| 5. | ಫಲಾನುಭವಿಗಳ ಸಂಖ್ಯೆ | 276742 |
| 6. | 2025-2026 ನೇ ಸಾಲಿನ ಬೆಳೆ ವಿಮೆ ಅರ್ಜಿಗಳ ಸ್ವೀಕೃತ (ಸಂಖ್ಯೆ) | 652440 |

3. 2023-24ನೇ ಸಾಲಿನಲ್ಲಿ ಅಡಿಕೆ ಎಲೆ ಚುಕ್ಕೆ ರೋಗದ ಸಂಶೋಧನೆಗಾಗಿ ರೂ.43.61/- ಲಕ್ಷಗಳ ಅನುದಾನವನ್ನು ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಶಿವಮೊಗ್ಗ ರವರಿಗೆ ಒದಗಿಸಲಾಗಿದ್ದು, ಸಂಶೋಧನೆ ಹಾಗೂ ರೈತರ ತಾಕುಗಳಲ್ಲಿ ಹೊಸ ತಂತ್ರಜ್ಞಾನಗಳನ್ನು ಅಳವಡಿಸಲು ಶಿವಮೊಗ್ಗ ಹಾಗೂ ಚಿಕ್ಕಮಗಳೂರು ಜಿಲ್ಲೆಗಳಲ್ಲಿ 8 ಪ್ರಾತ್ಯಕ್ಷತೆಗಳನ್ನು ಹಮ್ಮಿಕೊಂಡು, ರೋಗದ ನಿರ್ವಹಣೆಗಾಗಿ ಸಮಗ್ರ ರೋಗ ನಿರ್ವಹಣಾ ಅಧ್ಯಯನದ ಪ್ರಕಾರ ಉತ್ತಮ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳುವುದರ ಜೊತೆಗೆ ಸಮುದಾಯ ಮಟ್ಟದಲ್ಲಿ ಶಿಲೀಂಧ್ರ ನಾಶಕಗಳ ಸಕಾಲಿಕ ಸಿಂಪಡಣೆ, ಶಿಲೀಂಧ್ರದ ಸೋಂಕು, ರೋಗದ ಉಲ್ಬಣ ಮತ್ತು ಹರಡುವಿಕೆಯನ್ನು ಕಡಿಮೆ

| | | |
|---|---|---|
| | | ಮಾಡಲು ಸಹಾಯಕವಾಗುತ್ತದೆ. ಈ ಕುರಿತು ಈಗಾಗಲೇ ಅರಿವು ಮೂಡಿಸಲು ಅಗತ್ಯ ಕಾರ್ಯಕ್ರಮ ಕೈಗೊಳ್ಳಲಾಗುತ್ತಿದೆ.<br><br>4. ಸದರಿ ರೋಗ ಬಾಧೆಗೆ ನಿರ್ಧಿಷ್ಟವಾದ ಕಾರಣಗಳನ್ನು ಕಂಡು ಹಿಡಿಯಲು ಕೇಂದ್ರೀಯ ತೋಟದ ಬೆಳೆಗಳ ಸಂಶೋಧನಾ ಕೇಂದ್ರ (CPCRI) ವಿಟ್ಲ, ದಕ್ಷಿಣ ಕನ್ನಡ ರವರಿಗೆ ರೂ.50.00 ಲಕ್ಷಗಳ ಅನುದಾನವನ್ನು ಪ್ರಯೋಗಾಲಯದ ಉನ್ನತೀಕರಣಕ್ಕಾಗಿ ಒದಗಿಸಲಾಗಿದೆ. ಇದರಿಂದ ರೋಗವನ್ನು ತುರ್ತಾಗಿ ಕಂಡು ಹಿಡಿಯಲು ಸಹಕಾರಿಯಾಗುತ್ತಿದೆ.<br><br>5. ರಾಜ್ಯದಲ್ಲಿ ಅಡಿಕೆ ಬೆಳೆಗೆ ರೋಗಗಳು ಹಾಗೂ ಪೋಷಕಾಂಶಗಳ ಸಮಗ್ರ ನಿರ್ವಹಣೆಗೆ ಒಟ್ಟಾರೆ ರೂ.57776.33 ಲಕ್ಷಗಳ ಪ್ರಸ್ತಾವನೆಯನ್ನು ಸಿದ್ಧಪಡಿಸಿ MIDH ಮಾರ್ಗಸೂಚಿಯನ್ವಯ ಶೇ.30 ರ ಸಹಾಯಧನದಂತೆ ಕೇಂದ್ರ ಪಾಲು ರೂ.10399.74 ಲಕ್ಷಗಳು ಹಾಗೂ ರಾಜ್ಯ ಪಾಲು ರೂ.6933.14 ಲಕ್ಷಗಳ ಒಟ್ಟು ರೂ. 17332.90 ಲಕ್ಷಗಳ ಅನುಸಾರ ಪ್ರಸ್ತಾವನೆಯನ್ನು ಸಿದ್ಧಪಡಿಸಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ.<br><br>6. ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಅಡಿಕೆ ಬೆಳೆ ಸೇರಿದಂತೆ ತೋಟಗಾರಿಕೆ ಬೆಳೆಗಳ ಸಮಗ್ರ ರೋಗ/ಕೀಟಗಳ ಹಾಗೂ ಪೋಷಕಾಂಶಗಳ ನಿರ್ವಹಣೆಗಾಗಿ ಘಟಕ ವೆಚ್ಚರಲ್ಲಿ ರೂ.5000/- ಪ್ರತಿ ಹೆಕ್ಟೇರ್ ಶೇ.30ರಂತೆ ಪ್ರತಿ ಹೆಕ್ಟೇರಿಗೆ ರೂ.1500/- ರಂತೆ 2 ಹೆಕ್ಟೇರ್ ರವರೆಗೆ ರೂ.3000/- ಗಳ ಸಹಾಯಧನ ನೀಡಲಾಗುತ್ತಿದೆ.<br><br>7. ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗದ ತಜ್ಞರು ಹಾಗೂ ಇಲಾಖೆಯ ಅಧಿಕಾರಿಗಳ ಸಹಯೋಗದೊಂದಿಗೆ ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಅಡಿಕೆ ತೋಟಗಳ ಪೋಷಕಾಂಶ ನಿರ್ವಹಣೆ, ಬಸಿ ಕಾಲುವೆಗಳನ್ನು ಮಾಡುವುದು, ಹಸಿರೆಲೆ ಗೊಬ್ಬರದ ಬಳಕೆ ಹಾಗೂ ರಸ ಗೊಬ್ಬರಗಳ ಪೂರೈಕೆಗಳ ಕುರಿತು ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ ಕೈಗೊಳ್ಳಲಾಗುತ್ತಿದೆ ಹಾಗೂ ತರಬೇತಿ/ ಕಾರ್ಯಾಗಾರಗಳ ಮೂಲಕ ರೈತರಿಗೆ ಅರಿವು ಮೂಡಿಸಲಾಗುತ್ತಿದೆ. |
| ಈ) | ಹಳದಿ ರೋಗ ಮತ್ತು ಎಲೆಚುಕ್ಕಿ ರೋಗಗಳಿಂದ ಬಾಧಿತವಾಗಿರುವ ಪ್ರದೇಶಗಳಲ್ಲಿ ಬದಲಿ ಬೆಳೆಗಳನ್ನು ಬೆಳೆಯುವ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು | ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ಅಡಿಕೆ ಹಳದಿ ಎಲೆ ರೋಗ ಬಾಧಿತ ಪ್ರದೇಶಗಳಲ್ಲಿ ಅಡಿಕೆ ಬೆಳೆಯ ಬದಲಾಗಿ ಇತರೆ ವಾಣಿಜ್ಯ ತೋಟಗಾರಿಕೆ ಬೆಳೆಗಳಾದ ಬಾಳೆ, ತೆಂಗು, ಕಾಫಿ, ಕೋಕೋ, ಕಾಳು ಮೆಣಸು, ಜಾಯಿಕಾಯಿ, ಬೆಣ್ಣೆ ಹಣ್ಣು ಹಾಗೂ ಇತರೆ ಬೆಳೆಗಳನ್ನು ಬೆಳೆಯಲು ಆಯಾ ಬೆಳೆಗೆ ಅನುಗುಣವಾಗಿ ಶೇ.40 ರಷ್ಟು ಪ್ರತಿ ಹೆಕ್ಟೇರ್ ಗೆ ರೂ.11952 ರಿಂದ ರೂ.123483 ರವರೆಗೆ ಸಹಾಯಧನವನ್ನು 4 ಹೆಕ್ಟೇರ್ ವರೆಗೆ ನೀಡಲಾಗಿದ್ದು, ಈ ಬಾಬ್ತು ರಾಜ್ಯದಲ್ಲಿ 2022-23 ನೇ ಸಾಲಿನಲ್ಲಿ 812.19 ಹೆಕ್ಟೇರ್ ಪ್ರದೇಶಕ್ಕೆ 1328 ಫಲಾನುಭವಿಗಳಿಗೆ ರೂ.537.91 |

| | | |
|---|---|---|
| | ಕೈಗೊಂಡಿದೆ; ಬದಲಿ ಬೆಳೆಗಳನ್ನು ಬೆಳೆಯಲು ರೈತರಿಗೆ ಸಹಾಯಧನ ನೀಡಲು ಕ್ರಮವಹಿಸಲಾಗಿದೆಯೇ; ಬದಲಿ ಬೆಳೆಗಳನ್ನು ಬೆಳೆಯಲು ಎಕರೆಗೆ ಎಷ್ಟು ಮೊತ್ತದ ಸಹಾಯಧನ ನೀಡುವ ಬಗ್ಗೆ ಸರ್ಕಾರ ನಿರ್ಧರಿಸಿದೆ; ಇನ್ನೂ ನಿರ್ಧರಿಸಿಲ್ಲವಾದಲ್ಲಿ ಯಾವ ಕಾಲಮಿತಿಯಲ್ಲಿ ಈ ಬಗ್ಗೆ ಕ್ರಮವಹಿಸಲಾಗುವುದು; | ಲಕ್ಷಗಳ ಸಹಾಯಧನ ನೀಡಲಾಗಿರುತ್ತದೆ. 2023-24 ನೇ ಸಾಲಿನಲ್ಲಿ 811.11 ಹೆಕ್ಟೇರ್ ಪ್ರದೇಶದ ನಿರ್ವಹಣೆಗೆ 731 ಫಲಾನುಭವಿಗಳಿಗೆ ರೂ.149.30 ಲಕ್ಷ ಸಹಾಯಧನ ನೀಡಲಾಗಿರುತ್ತದೆ. |
| ಉ) | ದ.ಕ. ಜಿಲ್ಲೆಯ ಪುತ್ತೂರು, ಸುಳ್ಯ ಮತ್ತು ಕಡಬ ತಾಲ್ಲೂಕುಗಳಲ್ಲಿ ಕಾಫಿ ಬೆಳೆಯುವ ಬಗ್ಗೆ ಕಾಫಿ ಮಂಡಳಿಯವರು ನಡೆಸಿದ ಕ್ಷೇತ್ರ ಅಧ್ಯಯನದ ಬಗ್ಗೆ ವರದಿ ನೀಡಲಾಗಿದೆಯೇ ನೀಡಿದ್ದರೆ ಸದರಿ ಸಮಿತಿಯು ಮಾಡಿರುವ ಪ್ರಮುಖ ಶಿಫಾರಸ್ಸುಗಳು ಏನು? (ವಿವರ ಒದಗಿಸುವುದು). | ವರದಿ ನೀಡಿರುತ್ತಾರೆ.<br>ಸದರಿ ಸಮಿತಿಯು ಮಾಡಿರುವ ಶಿಫಾರಸ್ಸುಗಳು ಕೆಳಗಿನಂತಿವೆ.<br>1. ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು, ಸುಳ್ಯ ಮತ್ತು ಬೆಳ್ತಂಗಡಿ ಪ್ರದೇಶಗಳು ಕಾಫಿ ಬೆಳೆಯಲು ಸೂಕ್ತವಾಗಿರುತ್ತದೆ.<br>2. ಕಾಫಿ ಬೇಸಾಯದಲ್ಲಿ ನೀರಿನ ಕೊಯ್ಲೋತ್ತರ ತಂತ್ರಜ್ಞಾನದ ಅಳವಡಿಕೆ ಮತ್ತು ನೀರಾವರಿ ಅಂಶಗಳು ನಿರ್ಣಾಯಕವಾಗಿವೆ. ಈ ಕುರಿತು ಹೆಚ್ಚಿನ ಗಮನ ಹರಿಸಬೇಕಾಗಿದೆ.<br>3. ಕಾಫಿ ಬೆಳೆಯಲು ಮುಂದೆಬರುವ ರೈತರಿಗೆ ಪ್ರಸ್ತುತ ಯೋಜನೆಗಳಡಿ ಮಾರ್ಗಸೂಚಿಯನ್ವಯ ಸೌಲಭ್ಯಗಳನ್ನು ನೀಡಲಾಗುವುದು. |

**ಸಂಖ್ಯೆ: HORTI 527 HGM 2025**

**(ಎಸ್. ಎಸ್. ಮಲ್ಲಿಕಾರ್ಜುನ್)**

**ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು**